## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 224-ಎ ರಡಿಯಲ್ಲಿ ಸರ್ಕಾರಿ ನೌಕರರು ಹಿಂದೆ ಸಲ್ಲಿಸಿರುವ ಸರ್ಕಾರಿ ಸೇವೆಯನ್ನು ಪಿಂಚಣಿ ಉದ್ದೇಶಗಳಿಗೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸುವ ಬಗೆಗಿನ ಅಧಿಕಾರವನ್ನು ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸುವ ಬಗ್ಗೆ.

*****

**ಪ್ರಸ್ತಾವನೆ:**

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 224-ಬಿ ರಲ್ಲಿ ಸರ್ಕಾರಿ ನೌಕರರು ಹಿಂದೆ ಸಲ್ಲಿಸಿರುವ ಸರ್ಕಾರಿ ಸೇವೆಯನ್ನು ಪಿಂಚಣಿ ಉದ್ದೇಶಗಳಿಗೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸುವಲ್ಲಿ ಅನುಸರಿಸಬೇಕಾದ ವಿಧಿವಿಧಾನಗಳ ಬಗ್ಗೆ ವಿವರಿಸಲಾಗಿದೆ. ಈ ನಿಯಮಗಳ ಅನ್ವಯ ಇತರ ಉಪಬಂಧಗಳ ಜೊತೆಗೆ ನಿಯಮ 224-ಎ ರಡಿಯಲ್ಲಿ ಅರ್ಹತಾದಾಯಕ ಸೇವೆಯನ್ನು ಪರಿಗಣಿಸುವ ಬಗೆಗಿನ ಆದೇಶವನ್ನು ಸರ್ಕಾರದ ಅನುಮೋದನೆಯೊಂದಿಗೆ ಹೊರಡಿಸಬೇಕೆಂದು ತಿಳಿಸಲಾಗಿದೆ. ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 224-ಎ ರಡಿಯಲ್ಲಿನ ಪ್ರಸ್ತಾವನೆಗಳನ್ನು ಪರಿಗಣಿಸಿ ಅನುಮೋದನೆ ನೀಡುವ ಅಧಿಕಾರವನ್ನು ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸುವುದು ಅಗತ್ಯವೆಂದು ಪರಿಗಣಿಸಿ ಕೆಳಕಂಡ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಎಸ್ ಆರ್ ಎ 2011
ಬೆಂಗಳೂರು, ದಿನಾಂಕ:05-03-2011.

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 224-ಎ ರನ್ವಯ ಸರ್ಕಾರಿ ನೌಕರರು ಹಿಂದೆ ಬೇರೆ ಸರ್ಕಾರಿ ಇಲಾಖೆಗಳಲ್ಲಿ ಸಕ್ರಮವಾಗಿ ಸಲ್ಲಿಸಿದ ಸೇವೆಯನ್ನು ಪಿಂಚಣಿ ಉದ್ದೇಶಗಳಿಗೆ ಅರ್ಹತಾದಾಯಕ ಸೇವೆಯೆಂದು ಅನುಮತಿಸುವ ಅಧಿಕಾರವನ್ನು ಈ ಕೆಳಕಂಡ ಷರತ್ತು, ನಿಬಂಧನೆ ಮತ್ತು ವಿಧಿವಿಧಾನಗಳಿಗೆ ಒಳಪಟ್ಟು ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿದೆ.

(1). ದಿ:01.04.2006ರ ನಂತರ ಹೊಸದಾಗಿ ಸರ್ಕಾರಿ ಸೇವೆಗೆ ಸೇರುವ ನೌಕರರ ಪ್ರಕರಣಗಳಲ್ಲಿ ಕ.ನಾ.ಸೇ.ನಿ.ನಿಯಮ 224-ಎ ರ ಸೌಲಭ್ಯ ಲಭ್ಯವಾಗುವುದಿಲ್ಲ.

(2). ಸರ್ಕಾರಿ ನೌಕರರು ಈ ಹಿಂದೆ ಬೇರೆ ಸರ್ಕಾರಿ ಇಲಾಖೆಗಳಲ್ಲಿ ಸಕ್ರಮವಾಗಿ ನೇಮಕಾತಿ ನಿಯಮಾನುಸಾರ ನೇಮಕಗೊಂಡು ಸಲ್ಲಿಸಿದ ಸೇವೆಯನ್ನು ಮಾತ್ರ ಈ ನಿಯಮಗಳನ್ವಯ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ಅವಕಾಶವಿದೆ. ಅವರು ದಿನಗೂಲಿ, ಗುತ್ತಿಗೆ, ಅರೆಕಾಲಿಕ ಮತ್ತು ಸ್ಟೈಫೆಂಡರಿ ಇತ್ಯಾದಿ ತಾತ್ಕಾಲಿಕ ಆಧಾರದ ಮೇಲೆ ಸಲ್ಲಿಸಿದ ಸೇವೆಯನ್ನು ಪರಿಗಣಿಸಲು ಅವಕಾಶವಿಲ್ಲ.

(3). 1970,1973,1977 ಮತ್ತು 1986 ರ ವಿಶೇಷ ನಿಯಮಗಳನ್ವಯ ಸೇವಾ ಸಕ್ರಮಗೊಳ್ಳುವ ಪೂರ್ವದಲ್ಲಿ, ಸ್ಥಳೀಯ ಅಭ್ಯರ್ಥಿಗಳಾಗಿ ಹಿಂದೆ ಸಲ್ಲಿಸಿರುವ ಸೇವೆಯನ್ನು ಅವರು ವಾಸ್ತವವಾಗಿ ಸ್ಥಳೀಯ ಅಭ್ಯರ್ಥಿಯಾಗಿ ಸಲ್ಲಿಸಿದ ಸೇವೆಯನ್ನು ವಿಶೇಷ ನಿಯಮಾವಳಿಯಲ್ಲಿ, ಈ ಉದ್ದೇಶಕ್ಕಾಗಿ ಕಲ್ಪಿಸಿರುವ ಅವಕಾಶಗಳನ್ನು ಗಮನದಲ್ಲಿರಿಸಿ, ಅರ್ಹತಾದಾಯಕ ಸೇವೆಯೆಂದು ಪರಿಗಣಿಸಬಹುದು.

(4). ಸರ್ಕಾರಿ ನೌಕರರು ಸರ್ಕಾರಿ ಸೇವೆಗೆ ಸೇರುವ ಪೂರ್ವದಲ್ಲಿ ಸ್ಥಳೀಯ ಸಂಸ್ಥೆಗಳು, ಸ್ವಾಯತ್ತ ಸಂಸ್ಥೆಗಳು, ವಿಶ್ವವಿದ್ಯಾಲಯಗಳು ಮತ್ತು ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸಲ್ಲಿಸಿದ ಪಿಂಚಣಿಯುಕ್ತ ಸೇವೆಯನ್ನು ಈ ನಿಯಮಗಳಡಿಯಲ್ಲಿ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ಅವಕಾಶವಿಲ್ಲ. ಆದಾಗ್ಯೂ, ಅರ್ಹತೆಯನುಸಾರ ಸಂಬಂಧಪಟ್ಟ ನಿಯಮಗಳನ್ವಯ ಪರಿಶೀಲಿಸಿ ಆರ್ಥಿಕ ಇಲಾಖೆಯ ಅನುಮೋದನೆ ಪಡೆಯಬಹುದು.

(5). ಸರ್ಕಾರಿ ನೌಕರರು ಈ ನಿಯಮದ ಸೌಲಭ್ಯವನ್ನು ಪಡೆಯಲು ಕ.ನಾ.ಸೇ.ನಿ.ನಿಯಮ 224-ಬಿ ಜಾರಿಗೆ ಬಂದ ಐದು ವರ್ಷದೊಳಗೆ ಬೇರೊಂದು ಸರ್ಕಾರಿ ಸೇವೆಗೆ ನೇಮಕಾತಿ ನಿಯಮಾನುಸಾರ ಆಯ್ಕೆಗೊಂಡು ನೇಮಕ ಹೊಂದಿದಲ್ಲಿ, ಹಾಗೆ ನೇಮಕ ಹೊಂದಿದ ದಿನಾಂಕದಿಂದ ಮೂರು ವರ್ಷಗಳೊಳಗೆ ಅರ್ಜಿಯನ್ನು ಸಲ್ಲಿಸಬೇಕು. ತಡವಾಗಿ ಸಲ್ಲಿಸಿದ ಅರ್ಜಿಯನ್ನು ಪರಿಗಣಿಸಲು ಅವಕಾಶವಿಲ್ಲ.

(6). ಅರ್ಹತಾದಾಯಕ ಸೇವೆಯೆಂದು ಈ ನಿಯಮಗಳಡಿ ಪರಿಶೀಲಿಸುವಲ್ಲಿ ಸರ್ಕಾರಿ ನೌಕರರು ಈ ಹಿಂದೆ ಸಲ್ಲಿಸಿದ ಸೇವೆಗೆ ಸಂಬಂಧಪಟ್ಟ ಮೂಲ ಸೇವಾ ಪುಸ್ತಕಗಳ ಆಧಾರದ ಮೇಲೆ ಮಾತ್ರ ಪರಿಗಣಿಸಬೇಕು. ಸೇವಾ ಪ್ರಮಾಣಪತ್ರದ ಆಧಾರದ ಮೇಲೆ ಪರಿಗಣಿಸಲು ಅವಕಾಶವಿಲ್ಲ.

(7). ಬೇರೊಂದು ಸರ್ಕಾರಿ ಸೇವೆಯನ್ನು ಕೈಗೊಳ್ಳುವ ನೌಕರರ ಪ್ರಕರಣಗಳಲ್ಲಿ ಹಿಂದಿನ ಸರ್ಕಾರಿ ಸೇವೆಯನ್ನು ಈ ಉದ್ದೇಶಕ್ಕಾಗಿ ಪರಿಗಣಿಸಬೇಕಾಗುವಲ್ಲಿ, ಸರ್ಕಾರಿ ನೌಕರರು ಹೊಸ ಸರ್ಕಾರಿ ಹುದ್ದೆಯನ್ನು ಸೇರುವ ಪೂರ್ವದಲ್ಲಿ ಸಕ್ಷಮ ಪ್ರಾಧಿಕಾರದ ಮೂಲಕ ಅರ್ಜಿಯನ್ನು ಸಲ್ಲಿಸಿರಬೇಕು ಮತ್ತು ಹೊಸ ಹುದ್ದೆಯನ್ನು ಸೇರುವ ಉದ್ದೇಶಕ್ಕಾಗಿಯೇ ಆ ಇಲಾಖೆಯಿಂದ ಬಿಡುಗಡೆ ಹೊಂದಿರಬೇಕು. ಒಂದು ವೇಳೆ ಅವರು ಸರ್ಕಾರಿ ಸೇವೆಗೆ ಸೇರುವ ಪೂರ್ವದಲ್ಲಿ ಅರ್ಜಿ ಸಲ್ಲಿಸಿ ಮತ್ತೊಂದು ಸರ್ಕಾರಿ ಹುದ್ದೆಗೆ ಆಯ್ಕೆ ಹೊಂದಿರುವಲ್ಲಿ ಸಕ್ಷಮ ಪ್ರಾಧಿಕಾರದ ಮೂಲಕ ಈ ಉದ್ದೇಶಕ್ಕಾಗಿ ಬಿಡುಗಡೆ ಹೊಂದಿರಬೇಕು. ಕ.ನಾ.ಸೇ.ನಿ.ನಿಯಮ 252-ಬಿ ರನ್ವಯ ತಾಂತ್ರಿಕ ರಾಜೀನಾಮೆ ನೀಡಿದ ಪ್ರಕರಣಗಳಲ್ಲಿಯೂ ಈ ಸೌಲಭ್ಯ ಪರಿಗಣಿಸಬಹುದು.

(8). ಹೊಸ ಹುದ್ದೆಗೆ ಹಾಜರಾಗುವಲ್ಲಿ ಕ.ನಾ.ಸೇ.ನಿ.ನಿಯಮ 76(6)ನ್ನು, ನಿಯಮ 78ರೊಂದಿಗೆ ಓದಿಕೊಂಡ ರೀತ್ಯ ಲಭ್ಯವಾಗುವ ಸೇರಿಕೆ ಕಾಲವನ್ನು ಮೀರಿ, ಹೆಚ್ಚುವರಿ ಅವಧಿಯನ್ನು ಉಪಯೋಗಿಸಿಕೊಂಡಿರುವ ನೌಕರರ ಪ್ರಕರಣಗಳಲ್ಲಿ ಸೇವಾ ವಿಚ್ಛಿನ್ನತೆಯನ್ನು ಮನ್ನಾ ಮಾಡಲು ನಿಯಮಗಳಲ್ಲಿ ಅವಕಾಶವಿಲ್ಲದಿರುವುದರಿಂದ ಅವರ ಹಿಂದಿನ ಸಕ್ರಮ ಸೇವೆಯನ್ನು ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲಾಗದು.

(9). ಈ ನಿಯಮದನ್ವಯ ಹಿಂದಿನ ಸೇವೆಗಳಿಗೆ ಸಂಬಂಧಿಸಿದ ಅರ್ಹತಾದಾಯಕ ಸೇವೆಯನ್ನು ಲೆಕ್ಕಹಾಕುವಾಗ ಸರ್ಕಾರಿ ನೌಕರರ ಸೇವೆಯ ಅವಧಿಯಲ್ಲಿ ಪರಿಗಣಿಸಲಾದ ಯಾವುದೇ "ಲೆಕ್ಕಕ್ಕಿಲ್ಲದ ಅವಧಿ"ಯನ್ನು ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲಾಗದು.

2. ಸರ್ಕಾರಿ ನೌಕರರು ನಿಗದಿತ ಅವಧಿಯೊಳಗೆ ಸಲ್ಲಿಸುವ ಕೋರಿಕೆಯನ್ನು ಇಲಾಖಾ ಮುಖ್ಯಸ್ಥರು ನಿಯಮಾನುಸಾರ ಪರಿಶೀಲಿಸಿ, ಅರ್ಹ ಪ್ರಕರಣಗಳನ್ನು ಮಾತ್ರ ಸರ್ಕಾರದ ಕಾರ್ಯದರ್ಶಿಗಳ ಅನುಮೋದನೆಗಾಗಿ ಸಲ್ಲಿಸುವುದು. ಸರ್ಕಾರದ ಕಾರ್ಯದರ್ಶಿಗಳು ನಿಯಮಗಳ ಎಲ್ಲಾ ಷರತ್ತುಗಳು ಪೂರೈಕೆಯಾಗಿರುವುದನ್ನು ಖಚಿತಪಡಿಸಿಕೊಂಡು, ಸರ್ಕಾರಿ ನೌಕರರು ಈ ಹಿಂದೆ ಬೇರೊಂದು ಸರ್ಕಾರಿ ಇಲಾಖೆಯಲ್ಲಿ ಸಲ್ಲಿಸಿದ ಸಕ್ರಮ ಸೇವೆಯನ್ನು ಕ.ನಾ.ಸೇ.ನಿ.ನಿಯಮ 224-ಎ ರನ್ವಯ ಪಿಂಚಣಿ ಉದ್ದೇಶಗಳಿಗೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ಅನುಮೋದಿಸತಕ್ಕದ್ದು.

3. ಯಾವ ಯಾವ ಇಲಾಖೆಗಳಲ್ಲಿ ಆಂತರಿಕ ಆರ್ಥಿಕ ಸಲಹೆಗಾರರು ಇದ್ದಾರೋ ಅಂತಹ ಇಲಾಖೆಗಳಲ್ಲಿ ಆಂತರಿಕ ಆರ್ಥಿಕ ಸಲಹೆಗಾರರಿಂದ ನಿಯಮಗಳ ಪೂರೈಕೆಯ ಬಗ್ಗೆ ಅಭಿಪ್ರಾಯ ಪಡೆಯತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

5/3/11
(ಪಿ.ನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1).

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 500 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸೇವೆಗಳು-3 ಶಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಾಧಿಕಾರಿಗಳು.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ).
9. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
10. ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು-೫೬೦೦೦೧.
11. ರಿಜಿಸ್ಟ್ರಾರ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಲೋಕಯುಕ್ತ, ಬೆಂಗಳೂರು.
13. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
15. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಅಪರ/ಸಹ/ಉಪ/ಅಧೀನ ಕಾರ್ಯದರ್ಶಿಗಳು.

[ಕ್ರಮ ಸಂಖ್ಯೆ:೭ ರಿಂದ ೧೪ ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].